# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 504 (571)

ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಉತ್ತರಿಸಬೇಕಾದ ದಿನಾಂಕ : 08.12.2023

******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ 5 ವರ್ಷಗಳಿಂದ ಉದ್ಯೋಗಿನಿ ಯೋಜನೆಯಡಿಯಲ್ಲಿ ಎಷ್ಟು ಜನ ಮಹಿಳೆಯರು ಪ್ರಯೋಜನ ಪಡೆದುಕೊಂಡಿರುತ್ತಾರೆ. | ಕಳೆದ 5 ವರ್ಷಗಳಿಂದ ಉದ್ಯೋಗಿನಿ ಯೋಜನೆಯಡಿಯಲ್ಲಿ 10292 ಜನ ಮಹಿಳೆಯರು ಪ್ರಯೋಜನ ಪಡೆದುಕೊಂಡಿದ್ದಾರೆ. |
| (ಆ) | ಸಾಲ ಪಡೆಯಲು ಬ್ಯಾಂಕುಗಳಿಂದ (NOC) ಪಡೆಯಬೇಕೆ; ಹಾಗಿದ್ದಲ್ಲಿ, ಕೆಲವು ಬ್ಯಾಂಕುಗಳು ಹೊರಡುಪಡಿಸಿ ಹಲವಾರು ಬ್ಯಾಂಕುಗಳು (NOC) ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಉದ್ಯೋಗಿನಿ ಯೋಜನೆಯಡಿ ಸಾಲ ಪಡೆಯಲು ಬ್ಯಾಂಕುಗಳಿಂದ NOC ಪಡೆಯುವುದು ಕಡ್ಡಾಯವಿರುವುದಿಲ್ಲ. |
| (ಇ) | ಬಂದಿದ್ದಲ್ಲಿ, ಇದ್ದನ್ನು ಸರಿಪಡಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಬಂದಿರುವುದಿಲ್ಲ. |
| (ಈ) | ಕಿರುಸಾಲ ಯೋಜನೆಯಡಿಯಲ್ಲಿ ನೀಡಲಾಗುತ್ತಿರುವ ಸಹಾಯಧನ ಎಷ್ಟು; ಇದರ ಫಲಾನುಭವಿಗಳ ವಿವರಗಳನ್ನು ಒದಗಿಸುವುದು; | ಕಿರುಸಾಲ ಯೋಜನೆಯಡಿಯಲ್ಲಿ ಯಾವುದೇ ಸಹಾಯಧನವನ್ನು ನೀಡದ ಕಾರಣ ಫಲಾನುಭವಿಗಳ ವಿವರ ಲಭ್ಯವಿರುವುದಿಲ್ಲ. |
| (ಉ) | ಮಹಿಳಾ ತರಬೇತಿ ಯೋಜನೆ ಬಾಗಲಕೋಟೆ ಜಿಲ್ಲೆಯಲ್ಲಿ ನಡೆಯುತ್ತಿದೆಯೇ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು) | 2023-24ನೇ ಸಾಲಿನಲ್ಲಿ ಮಹಿಳಾ ತರಬೇತಿ ಯೋಜನೆಯಡಿ ತರಬೇತಿ ನೀಡಲು ಸ್ವಯಂ ಸೇವಾ ಸಂಸ್ಥೆಗಳಿಂದ ಪ್ರಸ್ತಾವನೆಗಳನ್ನು ಆಹ್ವಾನಿಸಲಾಗುತ್ತಿದೆ. |

**ಸಂಖ್ಯೆ:** ಮಮಇ /85/ಮಅನಿ/2023

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಸಚಿವರು.